**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.925/2023.**

ಪಿರ್ಯಾದುದಾರರುಃ- ಸೇಂಟ್ ಮಿಲಾಗ್ರೀಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್
ಸೊಸೈಟಿ ಲಿಮಿಟೆಡ್., ಹಳದೀಪುರ ಶಾಖೆ,
ಪ್ರತಿನಿಧಿಸುವವರು,
ಶ್ರೀ ಅಭಿಷೇಕ ಆನಂದ ಮಾಸ್ತಿಕಟ್ಟೆ, ,
ನಿಷ್ಪತ್ ಮೆನೇಜರ್ ,
ತಾಲೂಕುಃ- ಹೊನ್ನಾವರ (ಉ.ಕ.).

**-ವಿರುದ್ಧ-**

ಆರೋಪಿಯ ಹೆಸರುಃ- ರಹೀನ ಮೊಹಮ್ಮದ ಗುರ್ಕಾರ ,
ವಯಸ್ಸು ಸುಮಾರುಃ- 26 ವರ್ಷ,
ಸಾಕೀನಃ- ಮುಸ್ಲಿಂಕೇರಿ ,
ಅಂಚೆಃ- ಹೆರಂಗಡಿ ,
ತಾಲೂಕುಃ- ಹೊನ್ನಾವರ (ಉ.ಕ.).

*****

**ದಂಡ ಪ್ರಕ್ರಿಯಾ ಸಂಹಿತೆ ಕಲಂ. 313 ರನ್ವಯ ಆರೋಪಿಯ ಹೇಳಿಕೆ.**

ಪ್ರಶ್ನೆಃ 1. ನೀವು ಪಿರ್ಯಾದುದಾರರ ಪರವಾಗಿ ಫ್ರಾಸಾ-1 ರವರ ಹೇಳಿಕೆಯನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ- ಕೇಳಿದ್ದೇನೆ.

ಪ್ರಶ್ನೆಃ 2. ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿ ಸಂಸ್ಥೆಯಲ್ಲಿ ಅಬ್ದುಲ್ ರಹಮಾನ್ ಅಬುಮೊಹಮ್ಮದ ಸಾಬರವರು BL No. 231 ರಡಿಯಲ್ಲಿ ಸಾಲವನ್ನು ಪಡೆದುಕೊಂಡಿದ್ದು ಇರುತ್ತದೆ. ಸದರಿ ಸಾಲಕ್ಕೆ ಆರೋಪಿಯಾದ ನೀವು ಜಾಮೀನುದಾರರಾಗಿದ್ದು, ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಹೊನ್ನಾವರ** ಶಾಖೆಯ ನಿಪಿ-1 ರ ಚೆಕ್ ನಂ.677030 ನ್ನು ದಿನಾಂಕ 17-05-2023 ರಂದು ರೂ.1,96,266/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕಿಗೆ

ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿರುತ್ತೀರೆಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು.

ಪ್ರಶ್ನೆಃ 3. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಕೆನರಾ ಬ್ಯಾಂಕ್., ಹೊನ್ನಾವರ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, ಆರೋಪಿಯ ಖಾತೆಯಲ್ಲಿ ಸಾಕಷ್ಟು ಹಣ ಇರುವುದಿಲ್ಲ 'Funds Insufficient' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 04-07-2023 ರಂದು ನಿಪಿ-2 ರ ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು.

ಪ್ರಶ್ನೆಃ 4. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 19-07-2023 ರಂದು ನಿಪಿ-3 ರ ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸನ್ನು ನೀವು ಸ್ವೀಕರಿಸದೇ ಇರುವ ಕಾರಣ ದಿನಾಂಕ 25-07-2023 ರಂದು ನಿಪಿ-5 ರಂತೆ ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು.

ಪ್ರಶ್ನೆಃ 5. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಿಪಿ-6 ರ ಅಥೋರೈಸೇಷನ್ ಲೆಟರನ್ನು ಹಾಜರುಪಡಿಸಿ ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು.

ಪ್ರಶ್ನೆ 6: ನಿಮ್ಮ ಪರವಾಗಿ ಏನಾದರೂ ಸಾಕ್ಷಿ ಇದೆಯೇ?

ಆರೋಪಿಯ ಉತ್ತರಃ-

ಪ್ರಶ್ನೆ 7: ಸದ್ರಿ ಪ್ರಕರಣ ಕುರಿತು ನೀವು ಏನಾದರೂ ಹೇಳುವುದು ಇದೆಯೇ?

ಆರೋಪಿಯ ಉತ್ತರಃ-

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ)

ಸಹಿ ಇದೆ.

**ದಿನಾಂಕಃ- 14-02-2025.**

**(ಈರಣ್ಣ ಹುಣಶಿಕಟ್ಟಿ).,**
**ಸ. ಪ್ರ. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.ರವರ ನ್ಯಾಯಾಲಯ.,ಹೊನ್ನಾವರ.**

ಆರೋಪಿಯ ಸಹಿಃ-
ಸಹಿ ಇದೆ.

****